ಕರ್ನಾಟಕ ಸರ್ಕಾರ

ಸಂಖ್ಯೆ:ಪಪೂಶಿ/ಶೈಶಾ/ಅ.ಪ.ಶು.ವಿ/2020-21

ನಿರ್ದೇಶಕರ ಕಛೇರಿ.
ಪದವಿ ಪೂರ್ವ ಶಿಕ್ಷಣ ಇಲಾಖೆ
ಸಂಪಿಗೆ ರಸ್ತೆ. 18ನೇ ಕ್ರಾಸ್
ಮಲ್ಲೇಶ್ವರಂ. ಬೆಂಗಳೂರು-12
ದಿನಾಂಕ: 13-11-2020.

**ಸುತ್ತೋಲೆ**

ವಿಷಯ: 2020-21ನೇ ಶೈಕ್ಷಣಿಕ ಸಾಲಿನಲ್ಲಿ ಹೊರ ರಾಜ್ಯಗಳಿಂದ 12ನೇ ತರಗತಿ ವ್ಯಾಸಂಗ ಮುಂದುವರೆಸಲು ಬರುವ ಎಲ್ಲಾ ವಿದ್ಯಾರ್ಥಿಗಳಿಗೆ ಕಾಲೇಜು ಬದಲಾವಣೆ ಹಾಗೂ ಅರ್ಹತಾ ಪತ್ರದ ಶುಲ್ಕ ವಿನಾಯಿತಿ ನೀಡುವ ಕುರಿತು.

ಉಲ್ಲೇಖ: ಸರ್ಕಾರದ ಅದೇಶದ ಸಂಖ್ಯೆ: ಇಪಿ 214 ಎಸ್‌ಹೆಚ್‌ಹೆಚ್ 2020 ದಿನಾಂಕ 05/09/2020.

*****

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ ಉಲ್ಲೇಖಿತ ಪತ್ರದಂತೆ 2020-21ನೇ ಶೈಕ್ಷಣಿಕ ಸಾಲಿನಲ್ಲಿ ಕೋವಿಡ್-19ರ ವಿಷಮ ಪರಿಸ್ಥಿತಿ ಇರುವುದರಿಂದ ಹಾಗೂ ಅದರಿಂದಾಗಿ ಅನೇಕ ವಿಶಿಷ್ಟ ಸನ್ನಿವೇಶಗಳು ಉದ್ಭವಿಸಿರುವುದರಿಂದ **2020-21ನೇ ಸಾಲಿಗೆ ಮಾತ್ರ ಅನ್ವಯಿಸಿ ಹೊರ ರಾಜ್ಯಗಳಿಂದ 12ನೇ ತರಗತಿ ವ್ಯಾಸಂಗ ಮುಂದುವರೆಸಲು ಬರುವ ಎಲ್ಲಾ ವಿದ್ಯಾರ್ಥಿಗಳಿಗೆ ಕಾಲೇಜು ಬದಲಾವಣೆ ಹಾಗೂ ಅರ್ಹತಾ ಪತ್ರದ ಶುಲ್ಕ ವಿನಾಯಿತಿ ನೀಡಲಾಗಿದೆ. ಈ ಹಿಂದೆ ಸದರಿ ವಿಷಯದ ಸಂಬಂಧ ಚಲನ್ ಮೂಲಕ ಸರ್ಕಾರಕ್ಕೆ ಪಾವತಿಸಿರುವ ಹಣವನ್ನು ಹಿಂತಿರುಗಿಸಲಾಗುವುದಿಲ್ಲ.**

**ಮಾನ್ಯ ನಿರ್ದೇಶಕರ ಆದೇಶದ ಮೇರೆಗೆ**

R Kusum
13/11/2020
ಜಂಟಿ ನಿರ್ದೇಶಕರು (ಶೈಕ್ಷಣಿಕ)
ಪದವಿ ಪೂರ್ವ ಶಿಕ್ಷಣ ಇಲಾಖೆ

ಪ್ರತಿಗಳು:

1. ರಾಜ್ಯದ ಎಲ್ಲಾ ಜಿಲ್ಲಾ ಉಪ ನಿರ್ದೇಶಕರು ಇವರ ಮುಖಾಂತರ ಎಲ್ಲಾ ಪದವಿ ಪೂರ್ವ ಕಾಲೇಜುಗಳ ಪ್ರಾಂಶುಪಾಲರಿಗೆ ಮಾಹಿತಿ.
2. ಸಹಾಯಕ ನಿರ್ದೇಶಕರು, ಇ-ಆಡಳಿತ, ಪದವಿ ಪೂರ್ವ ಶಿಕ್ಷಣ ಇಲಾಖೆ ಬೆಂಗಳೂರು ಇವರಿಗೆ ಜಿಲ್ಲಾ ಉಪ ನಿರ್ದೇಶಕರುಗಳ ಇ-ಮೇಲ್‌ಗೆ ಹಾಗೂ ಅಂತರ್‌ಜಾಲದಲ್ಲಿ ಅಳವಡಿಸಲು.
3. ಕಛೇರಿ ಪ್ರತಿ.